710

ಮೈಸೂರ ಗೆಜೆಟ್.

ಸಂ. XXXI. ಸರ್ಕಾರದಿಂದ ಘಾಯಿಷ್ ಆದ್ದು. [ನಂ. 50.

ಬೆಂಗಳೂರು, ಗುರುವಾರ, ಡಿಸೆಂಬರ್ ತಾ॥ 17, ಸ॥ 1896.

IIನೇ ಭಾಗ.

ಇಂಡ್ಯಗವರ್ನ್‌ಮೆಂಟ್, ರೆಸಿಡೆಂಟರು, ಚೀಫ್ ಜಡ್ಜೀರು ವಗೈರೇರಿಂದ ಕೊಡ್ಸೋಣಾದ ಇಸ್ತಿಹಾರ್‌ನಾಮೆಗಳು.

ಫಾರೆಸ್ಟ್ ಇಲಾಖಾ.

ನೋಟಿಸ್.

ತಾರೀಖು 29ನೇ ಆಗಸ್ಟ್ 1894.

ಇದರಿಂದ ಸಮಸ್ತ ಜನಗಳಿಗೂ ತಿಳಿಯಪಡಿಸುವದೇನಂದರೆ,—ಕೆಳಿಗೆ ನಮೂದಿರುವ 12 ಕಬ್ಬಿಣದ ಆಲೆಗಳು ಬೆಂಗಳೂರು ಕೋಟೆಯಲ್ಲಿ ಹಳೇಸುಲ್ತಾನ್ ಮಹಲಿನಲ್ಲಿರುವ ಫಾರೆಸ್ಟ್ ಇಲಾಖಾ ಇನ್‌ಸ್ಪೆಕ್ಟರ್ ಜನರಲ್ ಸಾಹೇಬರವರ ಆಫೀಸಿನಲ್ಲಿ ಖರೀದಿಗೆ ದೊರೆಯುತ್ತೆ.

ನಂಬರ್.	ತಯಾರ್ ಮಾಡಿದ ಕಾರ್ಖಾನೆ ಹೆಸರು.	ಅಸಲ್ ಖರೀದಿ (ರೂಪಾಯಿ)
7	ಬೆಂಗಳೂರು ರಿಕ್ಕಿಯವರ ಕಾರ್ಖಾನೆ	ಒಂದಕ್ಕೆ 150
2	ಇಂಗ್ಲ್ಯಾಂಡ್ ಹೋರ್ಟರು ಬ್ರದರ್‌ಸ್‌ರ ಡಿಟೋ	,, 170
1	ಮದ್ರಾಸ್ ಓಕ್ಸ್‌ರವರ ಡಿಟೋ	,, 250
1	ಡಿಟೋ ಡಿಟೋ ಡಿಟೋ	,, 188
1	ಡಿಟೋ ಬೋರ್ಯಾಮ್‌ರವರ ಡಿಟೋ	,, 85

ಖರೀದೀದಾರ್ರು ವ್ಯವಸಾಯ ಮಾಡುವವರಾಗಿದ್ದಲ್ಲಿ ಅಸಲ್ ಖರೀದಿಯಲ್ಲಿ ಕೇಕಡಾ $10\frac{1}{2}$ ರೂಪಾಯಿ ಸೋಡಿಯಿಂದ ವಿಕ್ಯಯಿಸಲ್ಪಡುವದು.

ಯಲ್. ಬೆಕ್ಕೆಟ್ಸ್,
ಇನ್‌ಸ್ಪೆಕ್ಟರ್ ಜನರಲ್ ಆಫ್ ಫಾರೆಸ್ಟ್ಸ್.